# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 576 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಎಸ್.ವ್ಹಿ. ಸಂಕನೂರ |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರಿಗೆ ರಾಜ್ಯ ಸರ್ಕಾರಿ ನೌಕರರಿಗೆ ನೀಡಿದಂತೆ ಕರ್ನಾಟಕ ಆರೋಗ್ಯ ಸಂಜೀವಿನಿ (ಜ್ಯೋತಿ ಸಂಜೀವಿನಿ) ಯೋಜನೆಯನ್ನು ಜಾರಿಮಾಡಲಾಗಿದೆಯೇ; (ಮಾಹಿತಿ ನೀಡುವುದು) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ಅನುಷ್ಠಾನಗೊಳಿಸಲು ವಾರ್ಷಿಕವಾಗಿ ಅಂದಾಜು ರೂ.4.55 ಕೋಟಿ ವೆಚ್ಚದಲ್ಲಿ ಭರಿಸುವ ಸಂಬಂಧ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ಪ್ರಸ್ತುತ ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಆ) | ರಾಜ್ಯ ಸರ್ಕಾರಿ ನೌಕರರಿಗೆ ನೀಡಿದಂತೆ ಡಿ.ಸಿ.ಆರ್.ಜಿ. ಯೋಜನೆಯನ್ನು ಯಥಾವತ್ತಾಗಿ ವಸತಿ ಶಿಕ್ಷಣ ಸಂಸ್ಥೆಯ ನೌಕರರಿಗೆ ನೀಡಲಾಗುತ್ತಿದೆಯೇ ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು. | 6ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ದಿನಾಂಕ: 01-04-2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದಿರುವ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ ಇಡಿಗಂಟಿನ ಪರಿಹಾರ ಸೌಲಭ್ಯವನ್ನು ಹಿಂಪಡೆದು, ಸರ್ಕಾರ ಆದೇಶ ಸಂಖ್ಯೆ:ಆಇ 34 ಪಿಇಎನ್ 2018 ದಿನಾಂಕ: 23.06.2018 ರ ಮೂಲಕ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ಜಾರಿಗೊಳಿಸಲಾಗಿದೆ. ಈ ಆದೇಶವು ನೂತನ ಪಿಂಚಣೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಸದರಿ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವುದಿಲ್ಲ. ಆದುದರಿಂದ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಸಂಘದ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯ ವಿಸ್ತರಿಸಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆ ಹಿಂಬರಹ ನೀಡಿರುತ್ತದೆ.<br>ಮುಂದುವರೆದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ DCRG ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದ್ದು, ಅಂತಿಮ ನಿರ್ಣಯವಾಗುವವರೆಗೆ ಸಂಘದ ಅಧೀನದ ಸೇವಾನಿರತ ಖಾಯಂ ಸಿಬ್ಬಂದಿಗಳು ಆಕಾಲಿಕ ಮರಣ ಹೊಂದಿದ್ದಲ್ಲಿ ಅಂತಹ ಸಿಬ್ಬಂದಿಗಳ ಅವಲಂಬಿತ ಕುಟುಂಬದವರಿಗೆ ರೂ.5.00/- ಲಕ್ಷಗಳ ಪರಿಹಾರ ಧನವನ್ನು ಪಾವತಿಸಲು ಆದೇಶಿಸಲಾಗಿರುತ್ತದೆ. |

**ಇ)** ರಾಜ್ಯದ ಒಟ್ಟು ಎಷ್ಟು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿವೆ: ಅವುಗಳಲ್ಲಿ ಎಷ್ಟು ಮೇಲ್ದರ್ಜೆಗೇರಿಸಿ ಪದವಿ ಪೂರ್ವ ತರಗತಿಗಳನ್ನು ಪ್ರಾರಂಭಿಸಲಾಗಿದೆ; (ವಿವರವಾದ ಮಾಹಿತಿ ನೀಡುವುದು)

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 833 ಪರಿಶಿಷ್ಟ ಜಾತಿ- 503, ಪರಿಶಿಷ್ಟ ವರ್ಗ-156 ಮತ್ತು ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆಗಳಲ್ಲಿ 84 ವಸತಿ ಶಾಲೆಗಳಲ್ಲಿ ಪದವಿ ಪೂರ್ವ ತರಗತಿಗಳನ್ನು ಪ್ರಾರಂಭಿಸಿ ನಡೆಸಲಾಗುತ್ತಿದೆ.

**ಈ)** ಈ ರೀತಿ ಮೇಲ್ದರ್ಜೆಗೇರಿಸದ ಪದವಿ ಪೂರ್ವ ಕಾಲೇಜುಗಳಿಗೆ ಎಷ್ಟು ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ: ಇದಕ್ಕೆ ಸಂಬಂಧಿಸಿದಂತೆ ಸದ್ಯ ಕಾರ್ಯನಿರ್ವಹಿಸುತ್ತಿರುವ ಅರ್ಹತೆ ಹೊಂದಿರುವ ಎಷ್ಟು ಸಹಶಿಕ್ಷಕರನ್ನು ಉಪನ್ಯಾಸಕರನ್ನಾಗಿ ಪದೋನ್ನತಿ ನೀಡಲಾಗಿದೆ?(ಮಾಹಿತಿ ನೀಡುವುದು)

| ಕ್ರ.ಸಂ. | ವರ್ಗ | ವಸತಿ ಶಾಲೆಗಳ ಸಂಖ್ಯೆ | ಪದವಿಪೂರ್ವ ಕಾಲೇಜುಗಳ ಸಂಖ್ಯೆ | ಒಟ್ಟು |
|---|---|---|---|---|
| 1 | ಪರಿಶಿಷ್ಟ ಜಾತಿ | 491 | 12 | 503 |
| 2 | ಪರಿಶಿಷ್ಟ ವರ್ಗ | 154 | 2 | 156 |
| 3 | ಹಿಂದುಳಿದ ವರ್ಗ | 162 | 12 | 174 |
| | **Total** | **807** | **26** | **833** |

ಮೇಲ್ಕಂಡ 807 ವಸತಿ ಶಾಲೆಗಳ ಪೈಕಿ ಈ ಕೆಳಕಂಡ 58 ವಸತಿ ಶಾಲೆಗಳನ್ನು ಪದವಿಪೂರ್ವ ತರಗತಿಗಳೊಂದಿಗೆ ಮೇಲ್ದರ್ಜೆಗೇರಿಸಲಾಗಿದೆ.

| ಕ್ರ.ಸಂ. | ಮೇಲ್ದರ್ಜೆಗೇರಿಸಲಾಗಿರುವ ವಸತಿ ಶಾಲೆಗಳ ವಿವರ | ಉನ್ನತೀಕರಣ ವಸತಿ ಶಾಲೆಗಳ ಸಂಖ್ಯೆ |
|---|---|---|
| 1 | ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು | **30** |
| 2 | ಏಕಲವ್ಯ ಮಾದರಿ ವಸತಿ ಶಾಲೆಗಳು. | **12** |
| 3 | ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು. | **15** |
| 4 | ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳು | **01** |
| | **Total** | **58** |

ಮೇಲ್ದರ್ಜೆಗೇರಿಸಲಾದ 30 ಪದವಿ ಪೂರ್ವ ಕಾಲೇಜುಗಳಲ್ಲಿ ಆರ್ಥಿಕ ಇಲಾಖೆಯು 1C ಕಾಲೇಜುಗಳಿಗೆ ಮಾತ್ರ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಿದ್ದು, ಉಳಿದ 20 ಕಾಲೇಜುಗಳಿಗೆ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಲು ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಪ್ರಸ್ತುತ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ. ಆರ್ಥಿಕ ಇಲಾಖೆಯಿಂದ ಹುದ್ದೆಗಳ ಮಂಜೂರಾತಿಗೆ ಸಹಮತಿ ಪಡೆದ ನಂತರ ಉಪನ್ಯಾಸಕರ ಹುದ್ದೆಗಳ ಪದೋನ್ನತಿಗೆ ಕ್ರಮವಹಿಸಲಾಗುವುದು.

ಸಕಇ-ಎಂಡಿಎಸ್/223/2023

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು